ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ಫೆಬ್ರವರಿ 7, 2016

## ಮಾಜಿ ಸಚಿವ ಎಂ. ಎಂ. ನಾಣಯ್ಯ ಅವರ ನಿಧನಕ್ಕೆ ಮುಖ್ಯಮಂತ್ರಿ ಶೋಕ

ಬೆಂಗಳೂರು, ಫೆಬ್ರವರಿ 7:

ಎಸ್ ಎಂ ಕೃಷ್ಣ ಸರ್ಕಾರದಲ್ಲಿ ಅಬಕಾರಿ ಖಾತೆಯನ್ನು ಅತ್ಯಂತ ಸಮರ್ಥವಾಗಿ ನಿರ್ವಹಿಸಿದ ಮಾಜಿ ಸಚಿವ ಶ್ರೀ ಎಂ. ಎಂ. ನಾಣಯ್ಯ ಅವರ ನಿಧನಕ್ಕೆ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ತೀವ್ರ ಶೋಕ ವ್ಯಕ್ತಪಡಿಸಿದ್ದಾರೆ.

ಕೊಡಗು ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿಯ ಬಗ್ಗೆ ಅಪಾರ ಕಳಕಳಿ ಹಾಗೂ ಕಾಳಜಿ ಹೊಂದಿದ್ದ ಶ್ರೀ ನಾಣಯ್ಯ ಅವರು ಸದಾ ಕಾಲ ಜಿಲ್ಲೆಯ ಅಭಿವೃದ್ಧಿ ಕಾಮಗಾರಿಗಳತ್ತ ವಿಶೇಷ ಗಮನಹರಿಸುತ್ತಿದ್ದರು. ಅಲ್ಲದೆ, ಸ್ಥಳೀಯರ ಪ್ರೀತಿಗೆ ಪಾತ್ರರಾಗಿದ್ದರು. ಸದಾ ನೇರ ಮಾತಿನ ಶ್ರೀ ನಾಣಯ್ಯ ಅವರು ಸ್ನೇಹ–ಜೀವಿ

ಶ್ರೀ ನಾಣಯ್ಯ ಅವರು ಎಂದೂ ಒತ್ತಡ ಹಾಗೂ ಒತ್ತಾಯಗಳಿಗೆ ಮಣಿದವರಲ್ಲ. ಅಧಿಕಾರಿಗಳ ವರ್ಗಾವಣೆಗಳಲ್ಲಿ ಎಂದೂ ಹಸ್ತಕ್ಷೇಪ ಮಾಡಿದವರಲ್ಲ. ಕರ್ನಾಟಕ ಪಾನೀಯ ನಿಗಮವು ಶ್ರೀ ನಾಣಯ್ಯ ಅವರ ದೂರದೃಷ್ಟಿ ಹಾಗೂ ಪರಿಕಲ್ಪನೆ ಎಂದು ಶ್ರೀ ಸಿದ್ದರಾಮಯ್ಯ ಅವರು ತಮ್ಮ ಸಂದೇಶದಲ್ಲಿ ಬಣ್ಣಿಸಿದ್ದಾರೆ.

ಶ್ರೀ ನಾಣಯ್ಯ ಅವರ ಆತ್ಮಕ್ಕೆ ಚಿರಶಾಂತಿ ದೊರೆಯಲಿ. ಶ್ರೀ ನಾಣಯ್ಯ ಅವರ ಕುಟುಂಬ ಹಾಗೂ ಅಭಿಮಾನಿ ವರ್ಗಕ್ಕೆ ಶ್ರೀಯುತರ ಅಗಲಿಕೆಯಿಂದ ಉಂಟಾದ ದುಃಖವನ್ನು ಭರಿಸುವ ಶಕ್ತಿಯನ್ನು ಕರುಣಿಸಲಿ ಎಂದು ಮುಖ್ಯಮಂತ್ರಿ ಭಗವಂತನಲ್ಲಿ ಪ್ರಾರ್ಥಿಸಿದ್ದಾರೆ.

**********

ಡಿ ಪಿ ಎಂ